ದಿ: ೧೪.೦೨.೨೦೨೩ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ವಾದಿ ಪರವಾಗಿ ಶ್ರೀ ಜಿ.ಎನ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಂದುವರೆದ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ಗಡಿಗೇನಹಳ್ಳಿ ಗ್ರಾಮದ ಮನೆ ನಂ.೨ ಕ್ಕೆ ಸಂಬಂಧಿಸಿದ ೨೦೧೮-೧೯ ನೇ ಸಾಲಿನ ಫಾರಂ ನಂ.೧೧ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧ ಎಂದು, ಗಡಿಗೇನಹಳ್ಳಿ ಗ್ರಾಮದ ಖಾಲಿ ಜಾಗ ನಂ.೯/೫/೨ ಆಸ್ತಿಯ ದಾಖಲೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೨ ಎಂದು, ೭ ತೆರಿಗೆ ರಸೀದಿಗಳನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೩ ರಿಂದ ೯ ಎಂದು, ಹಕ್ಕುಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೦ ಎಂದು, ಖಾಲಿ ಜಾಗ ೯/೫/೨ ಪಂಚಾಯ್ತಿ ದಾಖಲೆಗಳನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೧ ಮತ್ತು ೧೨ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ಶ್ರೀ ಜಿ.ಎನ್. ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**